I/207237/2022

ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:42(25)-3-2: ಆರ್‌ಆರ್‌ಸಿ:21(ಇ-531054)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ, ಬೆಂಗಳೂರು,
ದಿನಾಂಕ: 11.01.2022

## ತಿದ್ದುಪಡಿ ಆದೇಶ

**ವಿಷಯ:** 2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಜೂರಾತಿ ನೀಡಿದ ರಸ್ತೆ ಕಾಮಗಾರಿಗಳ ಅನುಷ್ಠಾನ ಸಂಸ್ಥೆಯನ್ನು ಬದಲಾವಣೆ ಮಾಡುವ ಕುರಿತು.

**ಉಲ್ಲೇಖ:**
1. ಸರ್ಕಾರದ ಆದೇಶ ಸಂ: ಗ್ರಾಅಪ:42(25)-3: ಆರ್‌ಆರ್‌ಸಿ: 2021 (ಇ-531054), ದಿನಾಂಕ: 29.09.2021
2. ಸರ್ಕಾರದ ತಿದ್ದುಪಡಿ ಆದೇಶ ಸಂ: ಗ್ರಾಅಪ 42 (25)-3-2 ಆರ್‌ಆರ್‌ಸಿ:21 (ಇ-531054), ದಿನಾಂಕ: 02.12.2021

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ 2021-22 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ. 5.00 ಕೋಟಿಗಳ ಮೊತ್ತದಲ್ಲಿ 9 ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ ಅನುಷ್ಠಾನ ಮಾಡುವಂತೆ ಮಂಜೂರಾತಿ ನೀಡಲಾಗಿರುತ್ತದೆ.

ಸದರಿ ಮಂಜೂರಾತಿ ನೀಡಲಾಗಿದ್ದ 9 ರಸ್ತೆ ಕಾಮಗಾರಿಗಳಲ್ಲಿ ರೂ. 175.00 ಲಕ್ಷಗಳ ಮೊತ್ತದ 3 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಬದಲಾಗಿ ಕೆಆರ್‌ಐಡಿಎಲ್ ಸಂಸ್ಥೆಯಿಂದ ಅನುಷ್ಠಾನ ಮಾಡುವಂತೆ ಉಲ್ಲೇಖ (2) ರ ಆದೇಶದಲ್ಲಿ ಹೊರಡಿಸಲಾಗಿದೆ.

ಪ್ರಸ್ತುತ 9 ರಸ್ತೆ ಕಾಮಗಾರಿಗಳಲ್ಲಿ ಉಳಿದ ರೂ.3.25 ಕೋಟಿಗಳ 6 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಬದಲಾಗಿ ಕೆಆರ್‌ಐಡಿಎಲ್ ಸಂಸ್ಥೆಯಿಂದ ಅನುಷ್ಠಾನ ಮಾಡುವಂತೆ ಕೋರಿರುತ್ತಾರೆ.

ಆದ್ದರಿಂದ ಶಿವಮೊಗ್ಗ ಜಿಲ್ಲೆಯ ಭದ್ರಾವತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯರೂ. 3.25 ಕೋಟಿಗಳ ಮೊತ್ತದ 6 ರಸ್ತೆ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಬದಲಾಗಿ ಕೆಆರ್‌ಐಡಿಎಲ್ ಸಂಸ್ಥೆಯಿಂದ ಅನುಷ್ಠಾನ ಮಾಡಲು ಸರ್ಕಾರವು ಅನುಮೋದಿಸಿದೆ ಹಾಗೂ ಉಳಿದಂತೆ ಈ ಹಿಂದೆ ಹೊರಡಿಸಿರುವ ಆದೇಶದಲ್ಲಿ ಯಾವುದೇ ಬದಲಾವಣೆಯಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶದನುಸಾರ
ಮತ್ತು ಅವರ ಹೆಸರಿನಲ್ಲಿ

**Signed by Ramesh .d.o**
**Date: 11-01-2022 15:49:56**

11/1/22

(ರಮೇಶ್ ಡಿ.ಓ)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡಮ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿವಮೊಗ್ಗ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ